ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ,

## 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.

ಸಂಖ್ಯೆ.ಪಿಯು1.ಪರೀಕ್ಷೆ/ಪು.ಅ.ಫ.ಉ.ಅ/2025-26 ದಿನಾಂಕ: 15-10-2025

## ಸು ತ್ತೋ ಲೆ

**ವಿಷಯ: 2026 ರ ದ್ವಿತೀಯ ಪಿಯುಸಿ ಪರೀಕ್ಷೆ-1ಕ್ಕೆ ಪುನರಾವರ್ತಿತ ಅಭ್ಯರ್ಥಿಗಳು ಹಾಗೂ ಫಲಿತಾಂಶ ಉತ್ತಮ ಪಡಿಸಿಕೊಳ್ಳಲು ಇಚ್ಛಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಕುರಿತು.**

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ ಇಪಿ 203 ಎಸ್‌ಎಲ್‌ಬಿ 2023 ದಿನಾಂಕ:21/09/2023.

2) ಸರ್ಕಾರದ ಆದೇಶ ಸಂಖ್ಯೆ ಇಪಿ.139.ಎಸ್.ಎಲ್.ಬಿ.2024 ದಿನಾಂಕ:04-06-2024.

3) ಸರ್ಕಾರದ ಆದೇಶ ಸಂಖ್ಯೆ: ಇಡಿ 195 ಡಿಜಿಡಿ 2017 ಬೆಂಗಳೂರು ದಿನಾಂಕ 20-03-2018

-------

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ 2026 ರ ದ್ವಿತೀಯ ಪಿಯುಸಿ ಪರೀಕ್ಷೆ-1 ಕ್ಕೆ ಪುನರಾವರ್ತಿತ ಅಭ್ಯರ್ಥಿಗಳು ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೆಳಕಂಡಂತೆ ದಿನಾಂಕ ನಿಗದಿಪಡಿಸಲಾಗಿದೆ. ಈ ಸುತ್ತೋಲೆಯನ್ನು ಕಡ್ಡಾಯವಾಗಿ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವುದು..

**2026 ರ ದ್ವಿತೀಯ ಪಿಯುಸಿ ಪರೀಕ್ಷೆ-1 ಕ್ಕೆ ಪುನರಾವರ್ತಿತ ಅಭ್ಯರ್ಥಿಗಳು ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳು ONLINE ನಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ನೇರವಾಗಿ ಕಾಲೇಜಿನಲ್ಲಿ ನೊಂದಾಯಿಸಿಕೊಳ್ಳಲು ಅವಕಾಶ ಇರುವುದಿಲ್ಲ.**

### 2026 ರ ದ್ವಿತೀಯ ಪಿಯುಸಿ ಪರೀಕ್ಷೆ-1 ಕ್ಕೆ ಪುನರಾವರ್ತಿತ ಹಾಗೂ ಫಲಿತಾಂಶ ಉತ್ತಮ ಪಡಿಸಿಕೊಳ್ಳುವ ಅಭ್ಯರ್ಥಿಗಳು ONLINE ಮೂಲಕ ನೋಂದಣಿಯಾಗುವ ಕುರಿತು

### ವಿಶೇಷ ಸೂಚನೆಗಳು: -

1. ಅಭ್ಯರ್ಥಿಗಳು ONLINE ನಲ್ಲಿ ಅರ್ಜಿ ಸಲ್ಲಿಸಲು ಮಂಡಲಿಯಿಂದ ನೀಡಿರುವ https://dpue-exam.karnataka.gov.in/testapp2/REGPF ಲಿಂಕ್‌ಅನ್ನು ಬಳಸಿ ಅಥವಾ ಮಂಡಲಿಯ **https://kseab.karnataka.gov.in** ಅಂತರ್ಜಾಲದಲ್ಲಿ ಕೊಟ್ಟಿರುವ ಮೆನುವನ್ನು ಬಳಸಿ ಅರ್ಜಿ ಸಲ್ಲಿಸಬೇಕು.
2. ಅಭ್ಯರ್ಥಿಯು ತಮ್ಮ ಮೊಬೈಲ್ ನಂಬರ್ ಉಪಯೋಗಿಸಿಕೊಂಡು ಮೊದಲು ಅರ್ಜಿ ಸಲ್ಲಿಸಲು USER ID ಮತ್ತು PASSWORD ಅನ್ನು ಸೃಜನೆ ಮಾಡಿಕೊಳ್ಳಬೇಕು.
3. USER ID ಮತ್ತು PASSWORD ಅನ್ನು ಉಪಯೋಗಿಸಿಕೊಂಡು LOGIN ಅಗಿ ನಂತರ ಅರ್ಜಿ ಸಲ್ಲಿಸುವುದು.

4. ಅಭ್ಯರ್ಥಿಯು ತನ್ನ ಇತ್ತೀಚಿನ ಅನುತ್ತೀರ್ಣ ಅಂಕಪಟ್ಟಿ ಅಥವಾ ಪ್ರವೇಶ ಪತ್ರದಲ್ಲಿರುವ ನೋಂದಣಿ ಸಂಖ್ಯೆಯನ್ನು ನಮೂದಿಸಿದರೆ ವಿದ್ಯಾರ್ಥಿಯ ಮಾಹಿತಿ ಮತ್ತು ಅನುತ್ತೀರ್ಣವಾಗಿರುವ ವಿಷಯಗಳು ಹಾಗೂ ಪಾವತಿಸಬೇಕಾದ ಶುಲ್ಕವು ಸ್ವಯಂ ಪ್ರಕಟವಾಗುತ್ತದೆ. ನಂತರ ಭಾವಚಿತ್ರವನ್ನು (PHOTO) UPLOAD ಮಾಡಬೇಕು. (SCANNED PHOTO SIZE = 20 KB to 80 KB; FORMAT = JPG)
   ನೋಂದಣಿ ಸಂಖ್ಯೆ ಲಭ್ಯವಿಲ್ಲದಿದ್ದಲ್ಲಿ, ಸಹಾಯವಾಣಿ ಸಂಖ್ಯೆ 9448772500, 9886082073, 9663657041 ಅನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.
5. ಶುಲ್ಕದ ಮೊತ್ತವನ್ನು ONLINE ಮೂಲಕ ಪಾವತಿ ಮಾಡಬೇಕು. ನಂತರ ONLINE ನಲ್ಲಿ ಲಭ್ಯಗೊಳ್ಳುವ ರಸೀತಿ ಮತ್ತು ಅರ್ಜಿಯನ್ನು DOWNLOAD ಮಾಡಿ, ಮುದ್ರಿಸಿಕೊಂಡು ಪರೀಕ್ಷೆ ಮುಗಿಯುವವರೆಗೂ ಜೋಪಾನವಾಗಿ ಇಟ್ಟುಕೊಳ್ಳಬೇಕು. ಮಂಡಲಿಯಿಂದ ಪರಿಶೀಲನೆಗೆ ಕೇಳಿದಾಗ ಪ್ರಸ್ತುತ ಪಡಿಸಬೇಕು.
6. 2026ರ ದ್ವಿತೀಯ ಪಿಯುಸಿ ಪರೀಕ್ಷೆ-1ಕ್ಕೆ ಪುನರಾವರ್ತಿತ ಅಭ್ಯರ್ಥಿಗಳಾಗಿ ONLINE ನಲ್ಲಿ ನೋಂದಾಯಿಸಿಕೊಂಡು ನಿಗದಿತ ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು KSEAB ಜಾಲತಾಣದ PU Exam Portal ನ Principal Login ನ ಚೆಕ್‌ಲಿಸ್ಟ್‌ನಲ್ಲಿ ಲಭ್ಯಗೊಳಿಸಲಾಗುತ್ತಿದೆ.
7. 2024 ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆ-1 ಮತ್ತು ನಂತರದ ಪರೀಕ್ಷೆಗಳಲ್ಲಿ ಉತ್ತೀರ್ಣರಾದ (11 ಅಂಕಿ ನೋಂದಣಿ ಸಂಖ್ಯೆಯುಳ್ಳ) ಅಭ್ಯರ್ಥಿಗಳು ಫಲಿತಾಂಶ ಉತ್ತಮಪಡಿಸಿಕೊಳ್ಳಲು ತಾವು ಇಚ್ಛಿಸಿದ ವಿಷಯಗಳಿಗೆ ಅಥವಾ ಎಲ್ಲಾ ವಿಷಯಗಳಿಗೆ ನಿಗದಿತ ಶುಲ್ಕ ಪಾವತಿಸಿ 2026 ರ ದ್ವಿತೀಯ ಪಿಯುಸಿ ಪರೀಕ್ಷೆ-1ಕ್ಕೆ ನೋಂದಾಯಿಸಿಕೊಳ್ಳಬಹುದು. ಸದರಿ ಅಭ್ಯರ್ಥಿಗಳು ಫಲಿತಾಂಶ ಉತ್ತಮಪಡಿಸಿಕೊಂಡಲ್ಲಿ, ತಮ್ಮ ಹಿಂದಿನ ಮೂಲ ಉತ್ತೀರ್ಣ ಅಂಕಪಟ್ಟಿಯನ್ನು ಜಂಟಿ ನಿರ್ದೇಶಕರು (ಪಿಯು ಪರೀಕ್ಷೆ), ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003 ರವರಿಗೆ ಸಲ್ಲಿಸಿ ಹೊಸ ಅಂಕಪಟ್ಟಿಯನ್ನು ಪಡೆಯುವುದು.
8. ಫಲಿತಾಂಶ ಉತ್ತಮಪಡಿಸಿಕೊಳ್ಳಲು ಪರೀಕ್ಷೆ ತೆಗೆದುಕೊಂಡ ಅಭ್ಯರ್ಥಿಗಳ ಮಾಹಿತಿಯನ್ನು KSEAB ಜಾಲತಾಣದ PU Exam Portal Principal Login ನ ಚೆಕ್‌ಲಿಸ್ಟ್‌ನಲ್ಲಿ ಲಭ್ಯಗೊಳಿಸಲಾಗುವುದು. ಸದರಿ ಚೆಕ್‌ಲಿಸ್ಟ್‌ನ ಮುದ್ರಿತ ಪ್ರತಿಯನ್ನು ದೃಢೀಕರಿಸಿ ಪ್ರಾಂಶುಪಾಲರು ತಮ್ಮ ಜಿಲ್ಲೆಯ ಉಪನಿರ್ದೇಶಕರು (ಪದವಿ ಪೂರ್ವ) ರವರ ಕಛೇರಿಗೆ ಸಲ್ಲಿಸುವುದು.
9. ಪುನರಾವರ್ತಿತ ಅಭ್ಯರ್ಥಿಗಳಿಗೆ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಅವಕಾಶವಿರುವುದಿಲ್ಲ.

**2026 ರ ದ್ವಿತೀಯ ಪಿಯುಸಿ ಪರೀಕ್ಷೆ-1ಕ್ಕೆ**

**ಅ) ಪುನರಾವರ್ತಿತ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕದ ವಿವರ:**

| **ಪರೀಕ್ಷಾ ಶುಲ್ಕ (ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳನ್ನು ಹೊರತುಪಡಿಸಿ)** | |
|---|---|
| ಒಂದು ವಿಷಯಕ್ಕೆ | ರೂ. 140/- |
| ಎರಡು ವಿಷಯಕ್ಕೆ | ರೂ. 270/- |
| ಮೂರು ಅಥವಾ ಹೆಚ್ಚಿನ ವಿಷಯಗಳಿಗೆ | ರೂ. 400/- |

**ಆ) ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕದ ವಿವರ:**

| | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/- |
| ಎರಡನೇ ಹಾಗೂ ನಂತರದ ಪ್ರಯತ್ನಕ್ಕೆ ಒಂದು ವಿಷಯಕ್ಕೆ | ರೂ. 350/- |
| ಅಂಕಪಟ್ಟಿ ಶುಲ್ಕ | ರೂ. 50/- |

**2026 ರ ದ್ವಿತೀಯ ಪಿಯುಸಿ ಪರೀಕ್ಷೆ-1 ಕ್ಕೆ ಪುನರಾವರ್ತಿತ ಅಭ್ಯರ್ಥಿಗಳು ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳು ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳು:**

| ಕ್ರ. ಸಂ. | ವಿವರ | ಅಭ್ಯರ್ಥಿಗಳು ಶುಲ್ಕ ಪಾವತಿಸಲು ಕೊನೆಯ ದಿನಾಂಕ | ಕಾಲೇಜಿನ ಪ್ರಾಂಶುಪಾಲರು ಚೆಕ್‌ಲಿಸ್ಟ್ ಅನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|---|
| 1 | ದಂಡ ಶುಲ್ಕ ಇಲ್ಲದೆ | **25-11-2025** | **01-12-2025** |
| 2 | ದಂಡ ಶುಲ್ಕದೊಂದಿಗೆ ರಜಾ ದಿನಗಳನ್ನು ಹೊರತುಪಡಿಸಿ ಪರೀಕ್ಷಾ ಶುಲ್ಕದ ಜೊತೆಗೆ ದಿನವೊಂದಕ್ಕೆ ರೂ. 50-00 ರಂತೆ ಗರಿಷ್ಠ ರೂ.500-00. | **05-12-2025** | **05-12-2025** |

ಜಿಲ್ಲಾ ಉಪನಿರ್ದೇಶಕರುಗಳು ಪ್ರಾಂಶುಪಾಲರಿಂದ ಸ್ವೀಕರಿಸಿದ ಚೆಕ್‌ಲಿಸ್ಟ್ ಗಳನ್ನು ಪರಿಶೀಲಿಸಿ, ಅವುಗಳನ್ನು ತಮ್ಮ ಕಛೇರಿಗಳಲ್ಲಿಯೇ ಕಾಯ್ದಿರಿಸುವುದು. ಅವಶ್ಯವಿದ್ದಲ್ಲಿ ಮಾತ್ರ ಮಂಡಲಿಯ ಪರಿಶೀಲನೆಗೆ ಒದಗಿಸುವುದು.

ಅಧ್ಯಕ್ಷರು,
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ.

**ಪ್ರತಿಗಳು:-**

1. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.
2. ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಇವರಿಗೆ ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ "ಸೂಚನಾ ಫಲಕ" ದಲ್ಲಿ ಪ್ರಕಟಿಸಲು ತಿಳಿಸಿದೆ.
3. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು).
4. ಸಹಾಯಕ ನಿರ್ದೇಶಕರು, ಗಣಕ ಶಾಖೆ, (ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).
5. ಹೆಚ್ಚುವರಿ/ಕಛೇರಿ ಪ್ರತಿ.